# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 60 (461) |
| ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್. ಎಂ. ರಮೇಶಗೌಡ |
| ಉತ್ತರಿಸಬೇಕಾದ ದಿನಾಂಕ | 16/12/2021 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು; ಯಾವ ಯಾವ ಉದ್ಯಮಗಳಲ್ಲಿ ಎಷ್ಟು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ; (ವಿವರ ನೀಡುವುದು) | ಕಾರ್ಮಿಕ ಇಲಾಖೆಯಲ್ಲಿ ವಿವಿಧ ಕಾರ್ಮಿಕ ಕಾಯ್ದೆಗಳಡಿ ನೋಂದಾಯಿತರಾದ ವಿವರಗಳು ಹಾಗೂ ಇಲಾಖೆಯ ಅಡಿಯಲ್ಲಿ ಬರುವ ಮಂಡಳಿಗಳಲ್ಲಿ ಫಲಾನುಭವಿಗಳಾಗಿ ನೋಂದಾಯಿತರಾಗಿರುವ ಕಾರ್ಮಿಕರ ವಿವರಗಳು ಈ ಕೆಳಕಂಡಂತಿವೆ:<br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ 26.73 ಲಕ್ಷ ಕಟ್ಟಡ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೊಂದಣಿಯಾಗಿರುತ್ತಾರೆ.<br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br>ಅಸಂಘಟಿತ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ ಈವರೆಗೆ ಕಾರ್ಮಿಕ ಇಲಾಖೆಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ ಅಸಂಘಟಿತ ಕಾರ್ಮಿಕರ ನಿಖರವಾದ ಅಂಕಿ-ಸಂಖ್ಯೆಗಳು ಲಭ್ಯವಿರುವುದಿಲ್ಲ. ಆದರೆ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳು ಹಾಗೂ ಕೋವಿಡ್-19 ಪರಿಹಾರಕ್ಕಾಗಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ಅಂಕಿ-ಸಂಖ್ಯೆಗಳ ವಿವರಗಳು ಈ ಕೆಳಕಂಡಂತಿದೆ. |

| ಕ್ರ.ಸಂ. | ಯೋಜನೆ ಹೆಸರು | ಕಾರ್ಮಿಕರ ಸಂಖ್ಯೆ |
|---|---|---|
| 1 | ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | 8,40,561 (ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ) |
| 2 | ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ | 2,40,745 |
| 3 | ಕೋವಿಡ್-19ರ ವಿಶೇಷ ಪ್ಯಾಕೇಜ್ | 18,23,445 |

| | | |
|---|---|---|
| | | **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ** ನೋಂದಣಿ ವ್ಯವಸ್ಥೆ ಇರುವುದಿಲ್ಲ. ಆದರೆ ರೂ. 20:40 ರ ಅನುಪಾತದಲ್ಲಿ ವಂತಿಗೆ ಪಾವತಿಸುವ ಕಾರ್ಖಾನೆಗಳು, ಪ್ಲಾಂಟೇಷನ್‌ಗಳು, ಮೋಟಾರು ಸಂಸ್ಥೆಗಳು ಹಾಗೂ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ 50 ಕ್ಕಿಂತ ಹೆಚ್ಚು ಕಾರ್ಮಿಕರು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಂಘಟಿತ ಕಾರ್ಮಿಕರಿಗೆ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ಕಲ್ಯಾಣ ಯೋಜನೆಯಡಿಯಲ್ಲಿ ಸೌಲಭ್ಯಗಳನ್ನು ನೀಡಲಾಗುವುದು. ಮಂಡಳಿಗೆ ಒಟ್ಟು 41 ಲಕ್ಷ ಕಾರ್ಮಿಕರಿಂದ ವಂತಿಗೆ ಸ್ವೀಕರಿಸಲಾಗಿದೆ. ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.<br>ಕಾರ್ಮಿಕ ಇಲಾಖಾ ವತಿಯಿಂದ ಕಾರ್ಮಿಕರ ಸಂಖ್ಯೆ ಕುರಿತು ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಕಾರ್ಖಾನೆಗಳ ಕಾಯ್ದೆಯಡಿ ನೋಂದಾಯಿತವಾದ ಕಾರ್ಖಾನೆಗಳಲ್ಲಿ ಒಟ್ಟು 16,19,997 ಮಂದಿ ಕಾರ್ಮಿಕರಿದ್ದು, ಇವರೆಲ್ಲರನ್ನು ಸಂಘಟಿತ ವಲಯದವರೆಂದು ಪರಿಗಣಿಸಲಾಗಿದೆ. |
| ಆ) | ರಾಜ್ಯದ ಯಾವ ಯಾವ ನಗರಗಳಲ್ಲಿ ಇ.ಎಸ್.ಐ ಆಸ್ಪತ್ರೆಗಳಿವೆ: (ಅವುಗಳ ವಿವರವಾದ ಮಾಹಿತಿ ನೀಡುವುದು) | ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಇ.ಎಸ್.ಐ. ಆಸ್ಪತ್ರೆಗಳ ವಿವರವುಳ್ಳ ಪಟ್ಟಿಯನ್ನು **ಅನುಬಂಧ-2ರಲ್ಲಿ ಲಗತ್ತಿಸಿದೆ.** |
| ಇ) | ಸರ್ಕಾರವು ಕಾರ್ಮಿಕರಿಗೆ ನಿಗದಿಪಡಿಸಿರುವ ಮಾಸಿಕ ವೇತನ ಮತ್ತು ಇತರೆ ಭತ್ಯೆಗಳಾವುವು: ಕೆಲಸ ನಿರ್ವಹಿಸುವ ಜಾಗದಲ್ಲಿ ಕಾರ್ಮಿಕರಿಗೆ ಅಪಘಾತವಾಗಿ ಅಂಗವಿಕಲತೆ ಅಥವಾ ಇತರೆ ಊನ ತೊಂದರೆಗಳು ಆದಲ್ಲಿ, ಇಂತಹ ಕಾರ್ಮಿಕರಿಗೆ ಸರ್ಕಾರ ಮತ್ತು ಉದ್ಯೋಗದಾತರು ನೀಡುವ ಪರಿಹಾರಗಳೇನು: (ವಿವರವಾದ ಮಾಹಿತಿ ನೀಡುವುದು) | **ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿ :**<br>ಸರ್ಕಾರವು ಕನಿಷ್ಠ ವೇತನ ಕಾಯ್ದೆ 1948 ರಡಿ ಒಟ್ಟು ಎಂಬತ್ತೂರು (83) ಉದ್ದಿಮೆಗಳಿಗೆ ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಿದ್ದು, ಕಾಯ್ದೆಯ ನಿಯಮಾನುಸಾರ ಪ್ರತಿ 5 ವರ್ಷಗಳಿಗೆ ಮೀರದಂತೆ ಪರಿಷ್ಕರಣೆ ಕಾರ್ಯವನ್ನು ಕೈಗೊಳ್ಳುತ್ತಿದೆ. ಈ ಉದ್ದಿಮೆಗಳು ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರನ್ನೂ ಒಳಗೊಂಡಿರುತ್ತವೆ. ಸದರಿ ಅನುಸೂಚಿತ ಉದ್ದಿಮೆಗಳಿಗೆ 2021-22 ನೇ ಸಾಲಿಗೆ ಅನ್ವಯವಾಗುವ ಕನಿಷ್ಠದಿಂದ-ಗರಿಷ್ಠ ವೇತನ ದರಗಳ ವಿವರಗಳನ್ನು **ಅನುಬಂಧ-3** ರಲ್ಲಿ ಲಗತ್ತಿಸಿದೆ.<br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ** ಕಾರ್ಮಿಕರಿಗೆ ಯಾವುದೇ ವೇತನ ಅಥವಾ ಭತ್ಯೆಯನ್ನು ನಿಗದಿಪಡಿಸಿರುವುದಿಲ್ಲ.<br>ಕೆಲಸ ನಿರ್ವಹಿಸುವ ಜಾಗದಲ್ಲಿ ಕಾರ್ಮಿಕರಿಗೆ ಅಪಘಾತವಾಗಿ ಅಂಗವಿಕಲತೆ ಅಥವಾ ಇತರೆ ಊನ ತೊಂದರೆಗಳು ಆದಲ್ಲಿ, ಮಂಡಳಿಯಿಂದ ವತಿಯಿಂದ ನೀಡುತ್ತಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.<br>1. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ. |

| | | |
|---|---|---|
| | | 2. **ಅಪಘಾತ ಪರಿಹಾರ:** ಕಾರ್ಮಿಕನು ಮರಣ ಹೊಂದಿದ್ದಲ್ಲಿ **ರೂ.5,00,000/-, ಗಳ ಪರಿಹಾರ.** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/- ಮತ್ತು** ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/- ಗಳನ್ನು ಪರಿಹಾರವಾಗಿ ನೀಡಲಾಗಿರುತ್ತದೆ.**<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br>ಅಪಘಾತ ಪರಿಹಾರಕ್ಕೆ ಸಂಬಂಧಿಸಿದಂತೆ, ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ, ಸಾರಿಗೆ ಇಲಾಖೆಯಿಂದ ಸಾರಿಗೆ ವಾಹನ ಚಲಾಯಿಸಲು ಊರ್ಜಿತ ಚಾಲನಾ ಪರವಾನಗಿ ಹೊಂದಿದ ಚಾಲಕರಿಗೆ ಕರ್ತವ್ಯದಲ್ಲಿದ್ದಾಗ ಅಥವಾ ಕರ್ತವ್ಯದಲ್ಲಿ ಇರದ ಸಮಯದಲ್ಲೂ ಸಂಭವಿಸಿದ ಅಪಘಾತ ಪ್ರಕರಣಗಳಲ್ಲಿ ಮಂಡಳಿಯ ಮೂಲಕ ಈ ಕೆಳಕಂಡಂತೆ ಅಪಘಾತ ಪರಿಹಾರವನ್ನು ನೀಡಲಾಗುತ್ತಿದೆ.<br>• ಮರಣ ಹೊಂದಿದಲ್ಲಿ, ಅವರ ನಾಮನಿರ್ದೇಶಿತರಿಗೆ ರೂ.5 ಲಕ್ಷ ಪರಿಹಾರ.<br>• ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ್ದಲ್ಲಿ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2 ಲಕ್ಷದ ವರೆಗೆ ಪರಿಹಾರ.<br>• ತಾತ್ಕಾಲಿಕ ದುರ್ಬಲತೆ ಹೊಂದಿದಾಗ, ರೂ.1.00 ಲಕ್ಷದವರೆಗೆ ಆಸ್ಪತ್ರೆ ವೆಚ್ಚ ಮರುಪಾವತಿ.<br><br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ** ವತಿಯಿಂದ ಸಂಘಟಿತ ಕಾರ್ಮಿಕರಿಗೆ ಯಾವುದೇ ಮಾಸಿಕ ವೇತನ ಭತ್ಯೆಗಳನ್ನು ನಿಗದಿಪಡಿಸಲು ಅವಕಾಶವಿರುವುದಿಲ್ಲ. ಕೆಲಸ ನಿರ್ವಹಿಸುವ ಸ್ಥಳದಲ್ಲಿ ಕಾರ್ಮಿಕರಿಗೆ ಅಪಘಾತವಾಗಿ ಅಂಗವಿಕಲತೆ ಅಥವಾ ಇತರೆ ನ್ಯೂನತೆಗಳು ಉಂಟಾದಲ್ಲಿ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತದೆ.<br><br>1. **ಕಾರ್ಮಿಕರ ಅಪಘಾತ ಧನ ಸಹಾಯ :** ಕಾರ್ಮಿಕರಿಗೆ ಕೆಲಸದ ವೇಳೆಯಲ್ಲಿ ಅಪಘಾತವಾದಲ್ಲಿ ಕನಿಷ್ಠ ರೂ. 1,000/- ಗರಿಷ್ಠ ರೂ 10,000/- ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸಬೇಕಾಗುತ್ತದೆ.<br><br>2. **ಕಾರ್ಮಿಕರಿಗೆ ವೈದ್ಯಕೀಯ ನೆರವು :** ಹೃದಯ ಶಸ್ತ್ರಚಿಕಿತ್ಸೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಅರ್ಥೋಪೆಡಿಕ್, ಗರ್ಭಕೋಶದ ಶಸ್ತ್ರ ಚಿಕಿತ್ಸೆ, ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ ಚಿಕಿತ್ಸೆಗೆ ಕನಿಷ್ಠ ರೂ. 1,000/- |

| | | |
|---|---|---|
| | | ದಿಂದ ಗರಿಷ್ಠ ರೂ. 25,000/-ವರೆಗೆ ಮತ್ತು ಆರೋಗ್ಯ ತಪಾಸಣೆಗೆ ರೂ. 500/-ರಿಂದ ರೂ, 1,000/-ವರೆಗೆ ಧನ ಸಹಾಯ ನೀಡಲಾಗುವುದು. |
| ಈ) | ಸರ್ಕಾರವು ಕಾರ್ಮಿಕರ ಶ್ರೇಯೊಭಿವೃದ್ಧಿಗಾಗಿ ಅನುಷ್ಠಾನಗೊಳಿಸಿರುವ ಯೋಜನೆಗಳು ಯಾವುವು: ಈ ಯೋಜನೆಗಳ ಮಾನದಂಡಗಳೇನು: ಈ ಯೋಜನೆಯಡಿ ಕಳದೆರಡು ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಪ್ರಯೋಜನೆ ಪಡೆದಿರುವ ಕಾರ್ಮಿಕರ ಸಂಖ್ಯೆ ಎಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು) | ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ, ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿವಿಧ ಮಂಡಳಿಗಳ ಮೂಲಕ ಹಲವಾರು ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ವಿವಿಧ ಮಂಡಳಿಗಳು ಜಾರಿಗೊಳಿಸುತ್ತಿರುವ ಯೋಜನೆಗಳ ವಿವರಗಳು ಈ ಕೆಳಗಿನಂತಿವೆ:<br>**I. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ** ನೋಂದಾಯಿತರಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಿ ಜಾರಿಗೊಳಿಸಲಾಗುತ್ತಿದೆ. ವಿವರಗಳನ್ನು **ಅನುಬಂಧ-4** ರಲ್ಲಿ ನೀಡಿದೆ.<br>ಈ ಸೌಲಭ್ಯಗಳನ್ನು ಪಡೆಯಲು ಅನುಸರಿಸಬೇಕಾದ ಮಾನದಂಢಗಳ ವಿವರವನ್ನು ಅನುಬಂಧ-5 ರಲ್ಲಿ ಲಗತ್ತಿಸಿದೆ.<br>ಈ ಸೌಲಭ್ಯಗಳಡಿ ಹಾಸನ ಜಿಲ್ಲೆಯಲ್ಲಿ ಕಳೆದ 2 ಎರಡು ವರ್ಷದಲ್ಲಿ ಸಹಾಯಧನ ಪಡೆದ ಫಲಾನುಭವಿಗಳ ವಿವರವನ್ನು **ಅನುಬಂಧ-6** ರಲ್ಲಿ ಲಗತ್ತಿಸಿದೆ.<br>**II. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ** ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.<br>(1) **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**<br>ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಕರು ಮತ್ತು ಕ್ಲೀನರ್‌ಗಳು ಫಲಾನುಭವಿಗಳಾಗಿದ್ದು, ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>(ಅ) **ಅಪಘಾತ ಪರಿಹಾರ ಸೌಲಭ್ಯ:** ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ರೂ.2 ಲಕ್ಷದ ವರಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br>**ಮಾನದಂಡ:-**<br>• ಈ ಯೋಜನೆಯು ಕರ್ನಾಟಕ ರಾಜ್ಯಕ್ಕೆ ಮಾತ್ರ ಅನ್ವಯಿಸುತ್ತದೆ.<br>• ಯೋಜನೆಯು ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅನ್ವಯಿಸುತ್ತದೆ. |

| | | |
|---|---|---|
| | | • ವಯೋಮಿತಿ 20 ರಿಂದ 70 ವರ್ಷಗಳು.<br>• ಯೋಜನೆಯ ಸೌಲಭ್ಯಗಳು ಕರ್ತವ್ಯದಲ್ಲಿರುವಾಗ ಹಾಗೂ ಇಲ್ಲದಿರುವಾಗಲೂ ಸಂಭವಿಸಿದ ಅಪಘಾತ ಪ್ರಕರಣಗಳಲ್ಲಿ ಸಹ ಲಭ್ಯವಾಗುತ್ತವೆ.<br>• ಚಾಲಕರು, ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯಿಂದ ವಾಣಿಜ್ಯ ವಾಹನ ಚಲಾಯಿಸಲು ಊರ್ಜಿತ ಚಾಲನಾ ಪರವಾನಗಿಯನ್ನು ಹೊಂದಿರಬೇಕು.<br>(ಆ) **ಶೈಕ್ಷಣಿಕ ಧನ ಸಹಾಯ** : ಅಪಘಾತದ ಕಾರಣ ನಿಧನರಾದ ಹಾಗೂ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/–ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br>**ಮಾನದಂಡ:**<br>• ಫಲಾನುಭವಿಯ ಪೋಷಕರು ಚಾಲಕರಾಗಿದ್ದು, ಅಪಘಾತದಿಂದ ಮರಣ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿರಬೇಕು.<br>• 1 ರಿಂದ 12ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರಬೇಕು.<br>**(2) <u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:–</u>**<br>ಪ್ರಸ್ತುತ ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಲಾಗುತ್ತಿದೆ.<br>**<u>ಮಾನದಂಡ:–</u>**<br>• ಈ ಯೋಜನೆಯು ಕರ್ನಾಟಕ ರಾಜ್ಯಕ್ಕೆ ಮಾತ್ರ ಅನ್ವಯಿಸುತ್ತದೆ.<br>• ವಯೋಮಿತಿ 18 ರಿಂದ 60 ವರ್ಷಗಳು.<br>• ಪ್ರಸ್ತುತ ಮೇಲ್ಕಂಡ 11 ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಅನ್ವಯಿಸುತ್ತದೆ.<br>ಕಳೆದ 2 ವರ್ಷಗಳಲ್ಲಿ (ಪ್ರಸಕ್ತ ವರ್ಷವು ಸೇರಿದಂತೆ) ಹಾಸನ ಜಿಲ್ಲೆಯಲ್ಲಿ ಮೇಲ್ಕಂಡ ಯೋಜನೆಗಳಡಿ ಸೌಲಭ್ಯ ಪಡೆದ ಅಸಂಘಟಿತ ಕಾರ್ಮಿಕರ ತಾಲ್ಲೂಕುವಾರು ಮಾಹಿತಿಯನ್ನು **<u>ಅನುಬಂಧ–7 ರಲ್ಲಿ ಲಗತ್ತಿಸಿದೆ.</u>**<br><br>**III. ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯು** ಸಂಘಟಿತ ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ 20:40ರ ಅನುಪಾತದಲ್ಲಿ ವಂತಿಗೆ ಪಾವತಿಸುವ ಕಾರ್ಖಾನೆ, ಪ್ಲಾಂಟೇಷನ್, ಖಾಸಗಿ ಮೋಟರ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರಿಗೆ ಈ ಕೆಳಕಂಡ ಯೋಜನೆಗಳ ಸೌಲಭ್ಯಗಳನ್ನು ನೀಡಲಾಗುತ್ತಿದೆ. |

(ಈ ಕೆಳಕಂಡ ಸೌಲಭ್ಯಗಳನ್ನು ಪಡೆಯಲು ನಿಗದಿಪಡಿಸಿರುವ ಮಾನದಂಡಗಳನ್ನು ಅನುಬಂಧ–8 ರಲ್ಲಿ ಲಗತ್ತಿಸಿದೆ)

1) **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ**
2) **ಕಾರ್ಮಿಕರಿಗೆ ವೈದ್ಯಕೀಯ ನೆರವು**
3) **ಕಾರ್ಮಿಕರಿಗೆ ಅಪಘಾತ ಧನ ಸಹಾಯ**
4) **ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ**
5) **ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ**
6) **ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ**
7) **ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ**

ಹಾಸನ ಜಿಲ್ಲೆಗೆ ಸಂಬಂಧಿಸಿದಂತೆ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ 2019–20ನೇ ಸಾಲಿನಲ್ಲಿ 1215 ಹಾಗೂ 2020–21ನೇ ಸಾಲಿನಲ್ಲಿ 415 ಸಂಘಟಿತ ಕಾರ್ಮಿಕರಿಗೆ ಮತ್ತು ಅವರ ಕುಟುಂಬದ ಅವಲಂಬಿತರಿಗೆ ಕಲ್ಯಾಣ ಯೋಜನೆಯಡಿ ಸೌಲಭ್ಯಗಳನ್ನು ನೀಡಲಾಗಿದೆ. ಹಾಸನ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ಕೆಳಕಂಡಂತಿದೆ.

| **ತಾಲ್ಲೂಕುವಾರು** | **2019–20** | **2020–21** |
|---|---|---|
| ಹಾಸನ | 399 | 139 |
| ಚನ್ನರಾಯಪಟ್ಟಣ | 38 | 12 |
| ಹೊಳೇನರಸೀಪುರ | 79 | 17 |
| ಅರಕಲಗೂಡು | 55 | 3 |
| ಆಲೂರು | 550 | 6 |
| ಬೇಲೂರು | 29 | 0 |
| ಸಕಲೇಶಪುರ | 27 | 41 |
| ಅರಸೀಕೆರೆ | 38 | 197 |
| **ಒಟ್ಟು** | **1215** | **415** |

**ಕಾಇ 530 ಎಲ್‌ಇಟಿ 2021**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

# ಅನುಬಂಧ-1

ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆಚ್. ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 461

| ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ಒಳಪಡುವ ಸಂಸ್ಥೆಗಳು ಹಾಗೂ ಸಂಘಟಿತ ಕಾರ್ಮಿಕರ ವಿವರ | | | |
|---|---|---|---|
| Sl No | Name of the category | Firms | No of Workers |
| 1 | Garments | 610 | 2,95,000 |
| 2 | Private Hospitals | 244 | 69520 |
| 3 | Security Agencies | 384 | 216205 |
| 4 | Education & Charitable Trust | 176 | 31624 |
| 5 | Plantations | 275 | 18995 |
| 6 | Hotels | 375 | 52126 |
| 7 | Cinema | 16 | 892 |
| 8 | Media | 9 | 1962 |
| 9 | Factories | 7762 | 950188 |
| 10 | Sugar Factories | 40 | 15089 |
| 11 | Shops & Commercial Establishment | 4728 | 1255284 |
| 12 | Transport | 174 | 28022 |
| 13 | Software Companies | 1222 | 1070000 |
| 14 | KSRTC | 4 | 113000 |
| 15 | KPTCL | 6 | 13156 |
| | Grand Total | 16025 | 41,31,063 |

ಅನುಬಂಧ-2

**ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳು, ರಾಜಾಜಿನಗರ, ಬೆಂಗಳೂರು**

| ಕ್ರಮ ಸಂಖ್ಯೆ | ಕಾರಾವಿ ಆಸ್ಪತ್ರೆ ಹೆಸರು | ವಿಳಾಸ | ಜಿಲ್ಲೆ | ದೂರವಾಣಿ ನಂಬರ್ |
|---|---|---|---|---|
| 1 | ಕಾ ರಾ ವಿ ಆಸ್ಪತ್ರೆ ಇಂದಿರಾ ನಗರ | ಹೆಚ್.ಎ.ಎಲ್.2ನೇ ಹಂತ, ಇಂದಿರಾನಗರ ಬೆಂಗಳೂರು-560038 | ಬೆಂಗಳೂರು ನಗರ | 080-25266993 |
| 2 | ಕಾ ರಾ ವಿ ಆಸ್ಪತ್ರೆ ಮೈಸೂರು | ಕೆ.ಆರ್.ಎಸ್. ರಸ್ತೆ ಮೈಸೂರು-570020 | ಮೈಸೂರು | 0821-2512298 |
| 3 | ಕಾ ರಾ ವಿ ಆಸ್ಪತ್ರೆ ಮಂಗಳೂರು | ಕದ್ರಿ, ಶಿವಭಾಗ್, ಮಂಗಳೂರು-575002 | ದಕ್ಷಿಣ ಕನ್ನಡ | 0824-2218630 |
| 4 | ಕಾ ರಾ ವಿ ಆಸ್ಪತ್ರೆ ದಾವಣಗೆರೆ | ನಿಟ್ಟುವಳ್ಳಿ ಬಡಾವಣೆ ದಾವಣಗೆರೆ-577002 | ದಾವಣಗೆರೆ | 08192-259963 |
| 5 | ಕಾ ರಾ ವಿ ಆಸ್ಪತ್ರೆ ಹುಬ್ಬಳ್ಳಿ | ಕಾರವಾರ ರಸ್ತೆ ಹುಬ್ಬಳ್ಳಿ-580024 | ಧಾರವಾಡ | 0836-259963 |
| 6 | ಕಾ ರಾ ವಿ ಆಸ್ಪತ್ರೆ ಬೆಳಗಾವಿ | ಅಶೋಕ ನಗರ , ಬಿ.ಯು.ಡಿ.ಎ ಕಛೇರಿ ಹತ್ತಿರ, ಹೆಡ್ ಪೋಸ್ಟ್ ಆಫೀಸ್ ಶಿವಾಜಿನಗರ, ಬೆಳಗಾವಿ-16 | ಬೆಳಗಾವಿ | 0831-2474369 |
| 7 | ಕಾ ರಾ ವಿ ಆಸ್ಪತ್ರೆ ದಾಂಡೇಲಿ | ದಾಂಡೇಲಿ-581325 (ಉತ್ತರ ಕನ್ನಡ) | ಉತ್ತರ ಕನ್ನಡ | 08284-2331220 |

ಇದಲ್ಲದೇ ಕೇಂದ್ರ ಸರ್ಕಾರದ ಕಾರ್ಮಿಕ ರಾಜ್ಯ ವಿಮಾ ನಿಗಮದ ಅಡಿಯಲ್ಲಿ ರಾಜಾಜಿನಗರ, ಬೆಂಗಳೂರು ಹಾಗೂ ಕಲಬುರಗಿಯಲ್ಲಿ ಕಾರ್ಮಿಕರ ರಾಜ್ಯ ವಿಮಾ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ.

# ಅನುಬಂಧ – 3

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆಚ್. ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 461**

## ಕನಿಷ್ಠ ವೇತನ ಸಲಹಾ ಮಂಡಳಿ

**2021–22ನೇ ಸಾಲಿನ ಅನುಸೂಚಿತ ಉದ್ದಿಮೆಗಳಿಗೆ ಕನಿಷ್ಠ ವೇತನ ನಿಗದಿ ಮತ್ತು ಪರಿಷ್ಕರಣೆ ಕುರಿತ ಕನಿಷ್ಠ ಮತ್ತು ಗರಿಷ್ಠ ವೇತನ ದರಗಳ ವಿವರಣೆ**

| ಕ್ರಮ ಸಂಖ್ಯೆ | ಅನುಸೂಚಿತ ಉದ್ದಿಮೆಯ ಹೆಸರು | ಕನಿಷ್ಠ ವೇತನ ದರಗಳು (2021–22) | | | |
|---|---|---|---|---|---|
| | | ದೈನಿಕ | | ಮಾಸಿಕ | |
| | | ಕನಿಷ್ಠ | ಗರಿಷ್ಠ | ಕನಿಷ್ಠ | ಗರಿಷ್ಠ |
| 1 | ಬೇಸಾಯ ಮತ್ತು ಸಂಬಂಧಿತ ಕೆಲಸಗಳಲ್ಲಿ ಉದ್ಯೋಗ | 441.28 | 448.28 | 11473.16 | 11473.16 |
| 2 | ಲಘು ಪಾನೀಯ ಸೋಡಾ ಸಹಿತ ಎಲ್ಲಾ ಇಂಗಾಲಾಮ್ಲಿತ ಪಾನೀಯ, ಮಿನರಲ್ (ಖನಿಜ) ನೀರು ಮತ್ತು ಜ್ಯೂಸ್ (ಹಣ್ಣಿನ ರಸ) ಉತ್ಪಾದನೆ ಹಾಗೂ ಸಂಬಂಧಪಟ್ಟ ಪ್ರಕ್ರಿಯೆಗಳಲ್ಲಿ ಉದ್ಯೋಗ. | 431.60 | 506.60 | 11221.60 | 13171.60 |
| 3 | ಅಗರಬತ್ತಿ ತಯಾರಿಕೆ ಮತ್ತು ಸಾಂಬ್ರಾಣಿ (ಇನ್‌ಸೆನ್ಸ್) ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ | 383.90 | 443.52 | 9981.60 | 11531.60 |
| 4 | ಅಡಿಕೆ (ಸುಪಾರಿ)ಉದ್ದಿಮೆಗಳಲ್ಲಿ ಉದ್ಯೋಗ | 451.27 | 511.97 | 11733.20 | 13311.03 |
| 5 | ಸ್ವಯಂಯಾನ ಯಂತ್ರ ಶಾಸ್ತ್ರ (ಆಟೋಮೊಬೈಲ್ ಇಂಜಿನಿಯರಿಂಗ್) (ಉತ್ಪಾದನೆ, ಅಸೆಂಬ್ಲಿಂಗ್, ಬಾಡಿ ಬಿಲ್ಡಿಂಗ್, ಸರ್ವೀಸಿಂಗ್ ಮತ್ತು ರಿಪೇರಿ ಕೆಲಸಗಳ ಸಹಿತ) | 431.60 | 557.60 | 11221.60 | 14497.60 |
| 6 | ಬೇಕರಿ ಉದ್ದಿಮೆ ಮತ್ತು ಬೇಕಿಂಗ್ ಪ್ರಕ್ರಿಯೆಗಳಲ್ಲಿ ಉದ್ಯೋಗ. | 451.28 | 659.49 | 11733.20 | 17146.60 |
| 7 | ಬೀಡಿ ತಯಾರಿಕೆ ಪ್ರಕ್ರಿಯೆಯಲ್ಲಿ ಉದ್ಯೋಗ | 240.61 | 294.45 | 11756.60 | 16356.00 |
| 8 | ತಂಬಾಕು ಸಂಸ್ಕರಣಾ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 9 | ಬಿಸ್ಕತ್ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 10 | ಹಿತ್ತಾಳೆ, ತಾಮ್ರ, ಅಲ್ಯೂಮಿನಿಯಂ, ಉಕ್ಕು (ಸ್ಟೀಲ್), ಹಿಂಡಾಲಿಯಮ್ ಪಾತ್ರೆಗಳು ಮತ್ತು ಇತರೆ ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 11 | ಇಟ್ಟಿಗೆ ತಯಾರಿಕೆ ಹಾಗೂ ಪೂರ್ವ ಒತ್ತಡ (ಫ್ರೀ-ಸ್ಟ್ರೆಸ್‌ಡ್) ದೊಂದಿಗೆ ತಯಾರಿಸಿದ ಉತ್ಪನ್ನಗಳ ತಯಾರಿಕೆಯ ಉದ್ದಿಮೆಗಳಲ್ಲಿ ಉದ್ಯೋಗ | 451.28 | 617.16 | 11733.20 | 16046.20 |
| 12 | ಮರದ ಕೆಲಸ [ಕಾರ್ಪೆಂಟರಿ] ಹಾಗೂ ಮರ ಕೊಯ್ಯುವ [ಸಾಮಿಲ್] ಸಂಸ್ಥೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 13 | ಬೆಂಕಿ ಪೊಟ್ಟಣ ತಯಾರಿಕೆ ಉದ್ದಿಮೆಗಳಲ್ಲಿ ಉದ್ಯೋಗ | 341.00 | 366.03 | 8866.00 | 9517.00 |
| 14 | ಪ್ಲೈವುಡ್ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 15 | ಮರದ ದಿಮ್ಮಿಗಳ ಘಟಕಗಳಲ್ಲಿ ಉದ್ಯೋಗ. | 431.60 | 501.60 | 11221.60 | 13041.60 |
| 16 | ವಿನೀರ್ ಉದ್ದಿಮೆಗಳಲ್ಲಿ ಉದ್ಯೋಗ | 431.60 | 495.60 | 11221.60 | 12885.60 |
| 17 | ಏಲಕ್ಕಿ ಮಲೈಗಳು ಮತ್ತು ಏಲಕ್ಕಿ ತೋಟಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 18 | ಗೋಡಂಬಿ ಸಂಸ್ಕರಣಾ ಉದ್ದಿಮೆಗಳಲ್ಲಿ ಉದ್ಯೋಗ. | 422.15 | 477.05 | 10976.00 | 12406.00 |
| 19 | ಜೇಡಿ ಮಣ್ಣಿನ ಮಡಿಕೆಗಳು, ಸಿರಾಮಿಕ್ಸ್ ಸ್ಟೋನ್ | 431.60 | 503.60 | 11221.60 | 13093.60 |

| | | | | | |
|---|---|---|---|---|---|
| | ವೇರ್ ಮತ್ತು ಇತರೆ ಉತ್ಪನ್ನಗಳ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | | | | |
| 20 | ಸಿಂಕೋನಾ, ರಬ್ಬರ್, ಟೀ & ಕಾಫೀ ತೋಟಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿಗಳನ್ನು ಹೊರತುಪಡಿಸಿ) | 357.15 | 363.15 | 9286.00 | 9416.00 |
| 21 | ಸಿಂಕೋನಾ, ರಬ್ಬರ್, ಟೀ & ಕಾಫೀ ತೋಟಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿಗಳು) | 366.15 | 400.15 | 9500.00 | 10398.00 |
| 22 | ರಾಸಾಯನಿಕ ರಸಗೊಬ್ಬರ, ಕೀಟ ನಾಶಕ, ಕ್ರಿಮಿನಾಶಕ ಉತ್ಪಾದನಾ ಉದ್ದಿಮೆಯ ಕೆಲಸಗಳಲ್ಲಿ ಯೋಜನೆ | 451.28 | 659.49 | 11733.20 | 17146.60 |
| 23 | ಕ್ಲಬ್‌ಗಳಲ್ಲಿ ಉದ್ಯೋಗ | 431.60 | 496.60 | 11221.60 | 12911.60 |
| 24 | ಕಾಫಿ ಕ್ಯೂರಿಂಗ್ ಸಂಸ್ಥೆಗಳಲ್ಲಿ ಉದ್ಯೋಗ. | 451.15 | 555.42 | 11730.00 | 14441.00 |
| 25 | ಮಿಠಾಯಿ ತಯಾರಿಸುವ (ಕನ್‌ಫೆಕ್ಷನರಿ) ಉದ್ದಿಮೆಗಳಲ್ಲಿ ಉದ್ಯೋಗ. | 451.28 | 605.56 | 11733.20 | 15744.47 |
| 26 | ಹತ್ತಿ ಹೆಕ್ಕುವ, ಅಮಕುವ ಮತ್ತು ಸಂಬಂಧಪಟ್ಟ ಪ್ರಕ್ರಿಯೆಗಳ ಕೆಲಸಗಳಲ್ಲಿ ಉದ್ಯೋಗ. | 434.16 | 491.73 | 11288.28 | 12784.80 |
| 27 | ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಉದ್ಯೋಗ | 451.22 | 526.22 | 11731.60 | 13681.60 |
| 28 | ಗೃಹಕೃತ್ಯ ಸಹಾಯಕರು, ಮಕ್ಕಳ ಪೋಷಣಾ ಸಹಾಯಕರು, ಹೋಮ್ ನರ್ಸ್‌ಗಳ ಸಹಿತ ವಾಸದ ಮನೆಗಳಲ್ಲಿ ಗೃಹ ಕೆಲಸಗಳ ಉದ್ಯೋಗ | 451.22 | 536.22 | 11731.60 | 14461.60 |
| 29 | ಎಲೆಕ್ಟ್ರಾನಿಕ್ಸ್ ಉದ್ದಿಮೆಗಳಲ್ಲಿ ಉದ್ಯೋಗ | 431.60 | 526.60 | 11221.60 | 13691.60 |
| 30 | ಎಲೆಕ್ಟ್ರಾನಿಕ್ಸ್ ಮತ್ತು ಎಲೆಕ್ಟ್ರೋಪ್ಲೇಟಿಂಗ್ ಉದ್ದಿಮೆಗಳಲ್ಲಿ ಉದ್ಯೋಗ. | 431.60 | 506.60 | 11221.60 | 13171.60 |
| 31 | ಅನುಸೂಚಿತ ಪಟ್ಟಿಗೆ ಸೇರದ ಉದ್ದಿಮೆಯ ಕೆಲಸದಲ್ಲಿ ಉದ್ಯೋಗ. ಕರ್ನಾಟಕ ರಾಜ್ಯ ತಳ ಹಂತದ ಕನಿಷ್ಠ ವೇತನ. | 451.28 | 659.49 | 11733.60 | 17146.60 |
| 32 | ಇಂಜಿನಿಯರಿಂಗ್, ಫ್ಯಾಬ್ರಿಕೇಷನ್ ಹಾಗೂ ಸಂಬಂಧಪಟ್ಟ ಉದ್ದಿಮೆಯ ಕೆಲಸಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 33 | ಚಲನಚಿತ್ರ (ಸಿನಿಮಾ / ಕಿರು ಚಿತ್ರ) ಉದ್ದಿಮೆಗಳ ನಿರ್ಮಾಣ, ವಿತರಣೆ, ಜಾಹಿರಾತು ಹಾಗೂ ಸಂಬಂಧಪಟ್ಟ ಕೆಲಸಗಳಲ್ಲಿ ಉದ್ಯೋಗ | 431.60 | 521.60 | 11221.60 | 13561.60 |
| 34 | ಮೀನು ಹಿಡಿಯುವುದು, ಮೀನು ಸಂಸ್ಕರಣೆ, ಮೀನು ಪೀಲಿಂಗ್, ಸೀಗಡಿ / ಏಡಿ ಸಂಸ್ಕರಣೆ ಹಾಗೂ ಕಪ್ಪೆ ಕಾಲು ರಫ್ತು ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 404.45 | 606.60 | 11871.60 | 15771.60 |
| 35 | ಆಹಾರ ಸಂಸ್ಕರಣೆ ಮತ್ತು ಆಹಾರ ಪದಾರ್ಥಗಳ ಪ್ಯಾಕಿಂಗ್ (ಸಿದ್ಧ ತಿನಿಸುಗಳು, ಸಿದ್ಧ ಪಾನೀಯ ಹಾಗೂ ಮಸಾಲೆ ಸಹಿತ) ಪ್ರಕ್ರಿಯೆಗಳಲ್ಲಿ ಉದ್ಯೋಗ | 431.60 | 506.60 | 11221.60 | 13171.60 |
| 36 | ಅರಣ್ಯ ಮತ್ತು ಕಟ್ಟಿಗೆ ಡಿಪೋ (ಫಾರೆಸ್ಟ್ರಿ ಮತ್ತು ಟಿಂಬರಿಂಗ್) ಉದ್ದಿಮೆಗಳಲ್ಲಿ ಉದ್ಯೋಗ | 511.91 | 605.56 | 13311.03 | 15744.47 |
| 37 | ಫೌಂಡ್ರಿ (ಯಂತ್ರಗಳ ಸಹಿತ ಅಥವಾ ರಹಿತ ಮೆಷಿನ್ ಶಾಫ್) ಗಳಲ್ಲಿ ಉದ್ಯೋಗ | 431.60 | 557.60 | 11221.60 | 14497.60 |
| 38 | ಗಾಜು ಮತ್ತು ಗಾಜಿನ ಉತ್ಪನ್ನಗಳ ಸಂಸ್ಥೆಗಳಲ್ಲಿ ಉದ್ಯೋಗ | 431.60 | 511.60 | 11221.60 | 13301.60 |
| 39 | ಗ್ರಾನೈಟ್ ಕಲ್ಲುಗಳು ಹಾಗೂ ಮಾರ್ಬಲ್ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 40 | ಕೈಮಗ್ಗ ಮತ್ತು ವಿದ್ಯುತ್‌ಚಾಲಿತ ಮಗ್ಗ [ಹತ್ತಿ] ಉದ್ದಿಮೆಗಳಲ್ಲಿ ಉದ್ಯೋಗ. | 409.84 | 473.30 | 10656.00 | 12306.00 |

| | | | | | |
|---|---|---|---|---|---|
| 41 | ಆಸ್ಪತ್ರೆಗಳು, ಪ್ರಸವಾಲಯಗಳು (ಮೆಟರ್ನಿಟಿ ಹೋಂಗಳು), ಶುಶ್ರೂಷಾಲಯ (ನರ್ಸಿಂಗ್ ಹೋಂಗಳು) ಕ್ಲಿನಿಕ್, ಹಾಗೂ ವ್ಯಸನ ಮುಕ್ತ ಕೇಂದ್ರಗಳಲ್ಲಿ ಉದ್ಯೋಗ | 451.22 | 641.19 | 11731.60 | 16671.60 |
| 42 | ವಸತಿ ನಿಲಯಗಳು (ಹಾಸ್ಟೆಲ್‌ಗಳು), ಅತಿಥಿ ಗೃಹಗಳು, ಹೋಮ್ ಸ್ಟೇಗಳು, ಪೇಯಿಂಗ್ ಗೆಸ್ಟ್ ಸಂಸ್ಥೆಗಳು, ಸರ್ವೀಸ್ಡ್ ಅಪಾರ್ಟ್‌ಮೆಂಟ್‌ಗಳು, ರೆಸಿಡೆಂಟ್ಸ್ ಅಸೋಸಿಯೇಷನ್, ಮದುವೆ ಹಾಗೂ ಸಮುದಾಯ ಭವನಗಳಲ್ಲಿ ಉದ್ಯೋಗ | 431.60 | 518.60 | 11221.60 | 13483.60 |
| 43 | ಹೋಟೆಲ್ / ವಸತಿ ಸಹಿತ ಹೋಟೆಲ್‌ಗಳು, ರೆಸ್ಟೊರೆಂಟ್ ಮೋಟೆಲ್‌ಗಳು, ಲಾಡ್ಜ್‌ಗಳು, ಡಾಬಾಗಳು, ಕ್ಯಾಂಟೀನ್, ಹೊರಾಂಗಣ ಆಹಾರ ತಯಾರಿಕೆ ಹಾಗೂ ಸರಬರಾಜು (ಕೇಟರಿಂಗ್) ಮತ್ತು ಸಂಬಂಧಪಟ್ಟ ಸಂಸ್ಥೆಗಳಲ್ಲಿ ಉದ್ಯೋಗ | 431.60 | 536.68 | 11221.60 | 13951.60 |
| 44 | ಮಂಜುಗಡ್ಡೆ ಕಾರ್ಖಾನೆ (ಐಸ್ ಫ್ಯಾಕ್ಟರಿ) ಐಸ್ ಕ್ರೀಮ್ ಹಾಗೂ ಶೀತಲ ಸಂರಕ್ಷಣಾ ಸಂಸ್ಥೆಗಳಲ್ಲಿ ಉದ್ಯೋಗ. | 456.60 | 518.60 | 11871.60 | 13483.60 |
| 45 | ಖಂಡಸಾರಿ ಸಕ್ಕರೆ ಕಾರ್ಖಾನೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 46 | ಬಟ್ಟೆ ಒಗೆಯುವ, ಡ್ರೈಕ್ಲೀನ್ ಮತ್ತು ಲಾಂಡ್ರಿ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ | 431.60 | 521.60 | 11221.60 | 13561.60 |
| 47 | ಮದ್ಯ ತಯಾರಿಕಾ (ಡಿಸ್ಟಿಲರೀಸ್ ಹಾಗೂ ಬ್ರಿವರೀಸ್), ಬಾಟಲಿಂಗ್ ಹಾಗೂ ಪ್ಯಾಕಿಂಗ್ ಸಹಿತ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ | 431.60 | 506.60 | 11221.60 | 13171.60 |
| 48 | ಆಯುರ್ವೇದ, ಯೋಗ, ಯುನಾನಿ, ಸಿದ್ಧ ಹೋಮಿಯೋಪತಿ (ಆಯುಷ್) ಹಾಗೂ ಅಲೋಪಥಿಕ್ ಔಷಧಿಗಳ ತಯಾರಿಕೆಯಲ್ಲಿ ಉದ್ಯೋಗ. (ಉತ್ಪಾದನೆ, ವಿತರಣೆ ಜಾಹಿರಾತು ವಿಭಾಗಗಳ ಸಹಿತ) | 431.60 | 531.60 | 11221.60 | 13821.60 |
| 49 | ಅಕ್ಕಿ, ಭತ್ತ, ಜೋಳ ಅಥವಾ ಇನ್ನಿತರ ಧಾನ್ಯಗಳಿಂದ ಮಂಡಕ್ಕಿ, ಅವಲಕ್ಕಿ, ಚುರುಮುರಾ, ಮುರುಮುರಾ ಹಾಗೂ ಇತರೆ ಉತ್ಪನ್ನಗಳನ್ನು ತಯಾರಿಸುವ ಉದ್ದಿಮಗಳ ಕೆಲಸದಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 50 | ಮೆಟಲ್ ರೋಲಿಂಗ್ ಅಂಡ್ ರೀರೋಲಿಂಗ್– [ಫೆರಸ್] ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 51 | ಮೆಟಲ್ ರೋಲಿಂಗ್ ಅಂಡ್ ರೀರೋಲಿಂಗ್ ಉದ್ದಿಮೆಗಳಲ್ಲಿ ಉದ್ಯೋಗ. [ನಾನ್–ಫೆರಸ್] | 451.28 | 659.49 | 11733.20 | 17146.60 |
| 52 | ಲಘು ಸಿಮೆಂಟ್ ಸ್ಥಾವರಗಳಲ್ಲಿ ಉದ್ಯೋಗ. | 431.60 | 496.60 | 11221.60 | 12911.60 |
| 53 | ಮೊಸಾಯಿಕ್ ಹಂಚುಗಳು, ಎಲ್ಲಾ ರೀತಿಯ ನೆಲ ಹಾಸು ಹಂಚುಗಳು, ಹೊಳಪಿನ ಹಂಚುಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 54 | ಎಣ್ಣೆ ಮಿಲ್‌ಗಳಲ್ಲಿ ಉದ್ಯೋಗ. | 431.60 | 501.60 | 11211.60 | 13041.60 |
| 55 | ಪೆಟ್ರೋಲ್, ಡೀಸೆಲ್ ಆಯಿಲ್ ಮತ್ತು ಎಲ್.ಪಿ.ಜಿ. ಪಂಪ್‌ಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 56 | ಪ್ಲಾಸ್ಟಿಕ್, ಪಾಲಿ ಪ್ಲಾಸ್ಟಿಕ್, ರಬ್ಬರ್, ಪಿವಿಸಿ ಪೈಪ್ಸ್ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 431.60 | 496.60 | 11221.60 | 12911.60 |

| | | | | | |
|---|---|---|---|---|---|
| 57 | ಮುದ್ರಣ ಹಾಗೂ ಪ್ರಸರಣಾ ಉದ್ದಿಮೆಗಳಲ್ಲಿ ಉದ್ಯೋಗ | 431.60 | 503.60 | 11221.60 | 13093.60 |
| 58 | ಖಾಸಗಿ ವಿತ್ತ ನಿಗಮಗಳು, (ಫೈನಾನ್ಸ್ ಕಾರ್ಪೋರೇಷನ್) ಚಿಟ್ ಫಂಡ್‌ಗಳು ಹಾಗೂ ಕಾನೂನು ಬದ್ಧ ಬ್ಯಾಂಕಿಂಗ್ ರಹಿತ ನಗದು ವಹಿವಾಟು ಸಂಸ್ಥೆಗಳಲ್ಲಿ ಉದ್ಯೋಗ | 431.60 | 506.60 | 11221.60 | 13171.60 |
| 59 | ಶೌಚಾಲಯಗಳು, ಸ್ನಾನಗೃಹಗಳು, ಒಳಚರಂಡಿಗಳನ್ನು ಶುಚಿ ಮಾಡುವ (Scavenging) ಕೆಲಸಗಳಲ್ಲಿ ಉದ್ಯೋಗ. (ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹೊರತುಪಡಿಸಿ). | 591.22 | 641.22 | 15371.00 | 16671.60 |
| 60 | ಹಾಲು ಶೇಖರಣೆ, ಸಂಸ್ಕರಣೆ ಹಾಗೂ ವಿತರಣಾ ಪ್ರಕ್ರಿಯೆಯ ಉದ್ದಿಮೆಗಳಲ್ಲಿ ಉದ್ಯೋಗ | 431.60 | 506.60 | 11221.60 | 13171.60 |
| 61 | ಸಾರ್ವಜನಿಕ ಸಾರಿಗೆ ಸಂಸ್ಥೆಗಳ ಉದ್ದಿಮೆಗಳಲ್ಲಿ ಉದ್ಯೋಗ | 431.60 | 531.60 | 11221.60 | 13821.60 |
| 62 | ಕಾಗದ, ಪಲ್ಪ್ ಕಾಗದ, ರಟ್ಟಿನ ಹಲಗೆ (ಕಾರ್ಡ್‌ಬೋರ್ಡ್). ಹುಲ್ಲಿನ ಹಲಗೆ (ಸ್ಟ್ರಾ ಬೋರ್ಡ್) ಮತ್ತು ನ್ಯೂಸ್ ಪ್ರಿಂಟ್ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 63 | ಅಕ್ಕಿ, ಧಾನ್ಯಗಳು ಮತ್ತು ಬೇಳೆ ಗಿರಣಿ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 64 | ರಬ್ಬರ್ ಉತ್ಪನ್ನಗಳು (ಫೋಮ್ ಮತ್ತು ಕಾಯರ್ ರಬ್ಬರ್ ಸಹಿತ) ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 65 | ಔಷಧಿಗಳು, ಗೃಹಪಯೋಗಿ ವಸ್ತುಗಳ ವೃತ್ತಿಪರ ಪ್ರವರ್ತಕ ಮತ್ತು ಮಾರಾಟದಲ್ಲಿ ಉದ್ಯೋಗ | 431.60 | 526.60 | 11221.60 | 13961.60 |
| 66 | ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ. (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ). | 451.22 | 576.60 | 11731.60 | 14991.60 |
| 67 | ರೇಷ್ಮೆ ಘಟಕಗಳಲ್ಲಿ ಮತ್ತು ಪ್ರಕ್ರಿಯೆಗಳಲ್ಲಿ ಉದ್ಯೋಗ ಭಾಗ–1 | 418.74 | 605.50 | 10887.20 | 15744.47 |
| 68 | ರೇಷ್ಮೆ ಘಟಕಗಳಲ್ಲಿ ಮತ್ತು ಪ್ರಕ್ರಿಯೆಗಳಲ್ಲಿ ಉದ್ಯೋಗ ಭಾಗ–2 | 451.28 | 659.49 | 11733.20 | 17146.60 |
| 69 | ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 70 | ಸ್ಪಿನ್ನಿಂಗ್ ಮಿಲ್ ಉದ್ದಿಮೆಗಳಲ್ಲಿ ಉದ್ಯೋಗ | 351.88 | 378.73 | 9148.87 | 9847.08 |
| 71 | ಸ್ಪನ್ ಪೈಪುಗಳು, ಕಾಂಕ್ರೀಟ್ ಪೈಪುಗಳು, ಸಾನಿಟರಿ ಫಿಟ್ಟಿಂಗ್‌ಗಳು, ಪ್ಲೈನ್ ಸಿಮೆಂಟ್ ಕಾಂಕ್ರೀಟ್ (ಪಿ.ಸಿ.ಸಿ.) ಹಾಗೂ ರೀ–ಇನ್‌ಪೋರ್ಸ್‌ಡ್ ಸಿಮೆಂಟ್ ಕಾಂಕ್ರೀಟ್ (ಆರ್.ಸಿ.ಸಿ). ಪೈಪುಗಳು ಮತ್ತು ಕಂಬಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 431.60 | 531.60 | 11221.60 | 13821.60 |
| 72 | ಲೋಹದ ಅಲ್ಮೇರಾಗಳು, ಕುರ್ಚಿಗಳು, ಮೇಜುಗಳು ಹಾಗೂ ಇತರೆ ಪೀಠೋಪಕರಣಗಳನ್ನು ಉತ್ಪಾದಿಸುವ ಉದ್ದಿಮೆಗಳಲ್ಲಿ ಉದ್ಯೋಗ | 431.60 | 531.60 | 11221.60 | 13821.60 |
| 73 | ಕಲ್ಲು ಒಡೆಯುವುದು ಮತ್ತು ಕಲ್ಲು ಪುಡಿ ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 74 | ಚರ್ಮ ಹದ ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 345.26 | 384.26 | 8976.80 | 10000.80 |

| | | | | | |
|---|---|---|---|---|---|
| 75 | ಬಟ್ಟೆಗಳ ತಯಾರಿಕೆ (ಗಾರ್ಮೆಂಟ್ಸ್), ವಸ್ತ್ರ ವಿನ್ಯಾಸ (ಕಾಸ್ಟ್ಯೂಮ್ಸ್) ಮತ್ತು ಟೈಲರಿಂಗ್ ಉದ್ದಿಮೆಗಳಲ್ಲಿ ಉದ್ಯೋಗ | 354.21 | 413.41 | 9204.30 | 10758.86 |
| 76 | ರೇಷ್ಮೆ ಬಟ್ಟೆಗಳ (ಸಿಲ್ಕ್) ಉದ್ದಿಮೆಗಳಲ್ಲಿ ಉದ್ಯೋಗ | 419.36 | 512.95 | 10903.39 | 13336.70 |
| 77 | ಹೆಂಚು ತಯಾರಿಕೆ ಉದ್ದಿಮೆಗಳಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 78 | ಶೇಂದಿ ಇಳಿಸುವ ಉದ್ದಿಮೆಗಳಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 79 | ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಉದ್ಯೋಗ | 466.60 | 14991.60 | 12131.60 | 16751.60 |
| 80 | ಸಹಕಾರ ಸೊಸೈಟಿಗಳಲ್ಲಿ ಉದ್ಯೋಗ | 451.28 | 659.99 | 11733.20 | 17146.60 |
| 81 | ಚಿನ್ನ ಮತ್ತು ಬೆಳ್ಳಿ ಆಭರಣಗಳ ತಯಾರಿಕೆ ಮತ್ತು ಹರಳುಗಳು, ವಜ್ರಗಳನ್ನು ಕತ್ತರಿಸುವುದು, ಹೊಳಪು ಗೊಳಿಸುವ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 82 | ಬಟ್ಟೆಗಳಿಗೆ ಬಣ್ಣ ಹಾಕುವ (ಡೈ) ಮತ್ತು ಅಚ್ಚು ಹಾಕುವ (ಪ್ರಿಂಟ್) ಹಾಕುವ ಉದ್ದಿಮೆಗಳಲ್ಲಿ ಉದ್ಯೋಗ | 356.57 | 423.19 | 9270.95 | 11003.07 |
| 83 | ಸರಕು ಸಾಮಗ್ರಿಗಳ ಹೇರುವ ಮತ್ತು ಇಳಿಸುವ (ಲೋಡಿಂಗ್ ಮತ್ತು ಅನ್‌ಲೋಡಿಂಗ್) ಕೆಲಸಗಳಲ್ಲಿ ಉದ್ಯೋಗ | ತುಂಡು ಆಧಾರ | | | |

# ಅನುಬಂಧ-4

ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆಚ್. ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 461

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

**ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯ ಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ **ರೂ. 30,000/-** ಮತ್ತು ಗಂಡು ಮಗುವಿನ ಜನನಕ್ಕೆ**ರೂ.20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ):** ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ(ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | **ಪದವಿ ಪೂರ್ವ** | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |

| | | |
|---|---|---|
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು |
| | **ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ** | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | ಸದರಿ<br>ಕೋರ್ಸ್‌ನ ಗರಿಷ್ಠ<br>2 ವರ್ಷ ಅವಧಿಗೆ ಒಳಪಟ್ಟು<br>ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು<br>ವಾರ್ಷಿಕ ರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ.60,000<br>(ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ/ ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ<br>ಮೂರು ವರ್ಷಗಳಿಗೆ ಹಾಗೂ<br>ಎಮ್‌ಫಿಲ್‌ಗೆ 1 ವರ್ಷಕ್ಕೆ<br>ಪ್ರತಿ ವರ್ಷ<br>ರೂ. 25,000 (ಯೂಜಿಸಿಯ<br>ಜೂನಿಯರ್ ರಿಸರ್ಚ್ ಪೆಲೋಶಿಫ್‌ಗೆ<br>ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ<br>ಮತ್ತು<br>ರಾಜ್ಯ ಸರ್ಕಾರದಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ<br>ಯೂಜಿಸಿ ನಿಯಮಗಳನ್ವಯ ವೇತನ<br>ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ<br>ಅನುದಾನಿತ<br>ಕಾಲೇಜುಗಳಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು<br>ಈ ಸೌಲಭ್ಯವನ್ನು ಪಡೆಯಲು<br>ಅರ್ಹರಿರುವುದಿಲ್ಲ. |

| | | |
|---|---|---|
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | **ಪಾವತಿಸಿದ ಬೋದನಾ ಶುಲ್ಕ** |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ)**: ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/- ರಿಂದ ರೂ.10,000/-ವರೆಗೆ**

13. **ಅಪಘಾತ ಪರಿಹಾರ**: ಮರಣ ಹೊಂದಿದ್ದಲ್ಲಿ**ರೂ.5,00,000/-**, ಸಂಪೂರ್ಣ ಶಾಶ್ವತದುರ್ಬಲತೆಯಾದಲ್ಲಿ **ರೂ.2,00,000/- ಮತ್ತು** ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**

14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್‌ಚಿಕಿತ್ಸೆ, ಇತರೆ ಔಧ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ

15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**

16. **LPG ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ)**: ಅನಿಲ ಸಂಪರ್ಕದೊಂದಿಗೆ ಎರಡು ಬರ್ನರ್ ಸ್ಟೌವ್

17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ**: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತ'ಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ

18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ**: ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)

19. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ**ರೂ.6,000/-** ಗಳ ಸಹಾಯಧನ.

# ಅನುಬಂಧ-5

ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆಚ್. ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 461

## ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಸೌಲಭ್ಯಗಳನ್ನು ಪಡೆಯಲು ಸಲ್ಲಿಸಬೇಕಾದ ದಾಖಲೆಗಳು:

### ನಿಯಮ 39: ಪಿಂಚಣಿ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವುದು.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ.
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ನೋಂದಣಿಯಾಗಿ ಕನಿಷ್ಠ 3 ವರ್ಷ ಸದಸ್ಯತ್ವವನ್ನು ಪೂರ್ಣಗೊಳಿಸಿದ ನಂತರ 60 ವರ್ಷ ವಯಸ್ಸಾಗಿರಬೇಕು.
- ಸರ್ಕಾರದ ವಿವಿಧ ಯೋಜನೆಯಡಿಯಲ್ಲಿ ಈ ಸೌಲಭ್ಯ ಪಡೆಯುತ್ತಿರಬಾರದು.
- ಜೀವಿತ ಪ್ರಮಾಣ ಪತ್ರ ಸಲ್ಲಿಸುವುದು.
- ಫಲಾನುಭವಿಯ ಆಧಾರ್ ಕಾರ್ಡ್/ರೇಷನ್ ಕಾರ್ಡ್ ಸಲ್ಲಿಸುವುದು.

### ನಿಯಮ 40: ದುರ್ಬಲತೆ ಪಿಂಚಣಿ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವುದು.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ.
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಶಾಶ್ವತ ದುರ್ಬಲತೆಯಾಗಿರುವುದಕ್ಕೆ ಕಟ್ಟಡ ಕಾರ್ಮಿಕನ ಭಾವಚಿತ್ರ (ಫೋಟೋ).
- ದುರ್ಬಲತೆ ಗುರುತಿನ ಚೀಟಿ ಪಡೆದ ನಂತರ 6 ತಿಂಗಳೊಳಗಾಗಿ ಅರ್ಜಿ ಸಲ್ಲಿಸಬೇಕು.
- ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಪಘಾತ ಉಂಟಾಗಿ ಅದರಿಂದ ದುರ್ಬಲತೆಯಾಗಿರಬೇಕು.
- ಫಲಾನುಭವಿಗೆ ದುರ್ಬಲತೆಯಾಗಿರುವುದಕ್ಕೆ ಹಿರಿಯ ನಾಗರಿಕರ ಹಾಗೂ ಅಂಗವಿಕಲ ಸಬಲೀಕರಣ ಇಲಾಖೆ ಇವರಿಂದ ಪಡೆದ ಅಂಗವಿಕಲ ಗುರುತಿನ ಚೀಟಿಯ ಪ್ರತಿಯನ್ನು ಲಗತ್ತಿಸಬೇಕು.
- ಫಲಾನುಭವಿಯ ಆಧಾರ್ ಕಾರ್ಡ್/ರೇಷನ್ ಕಾರ್ಡ್ ಸಲ್ಲಿಸುವುದು.

**ನಿಯಮ 39(ಎ): ಕುಟುಂಬ ಪಿಂಚಣಿ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.**

- ನಮೂನೆ-12(ಎ) ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ.
- ಅರ್ಜಿದಾರರ ಕೋರಿಕೆ ಪತ್ರ.
- ಮೃತ ಪಿಂಚಣಿದಾರರ ಮರಣ ಪ್ರಮಾಣ ಪತ್ರ ಸಲ್ಲಿಸುವುದು.
- ನಾಮನಿರ್ದೇಶಿತರು ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಪಿಂಚಣಿದಾರರು ಮಂಡಳಿಯಿಂದ ಪಿಂಚಣಿ ಪಡೆಯುತ್ತಿರುವ ಅವಧಿಯಲ್ಲಿ ಮರಣ ಹೊಂದಿದರೆ ಮಾತ್ರ ಕುಟುಂಬ ಪಿಂಚಣಿ ಪಡೆಯಲು ಅವಕಾಶವಿರುತ್ತದೆ.
- ನಾಮನಿರ್ದೇಶಿತರ ಆಧಾರ್ ಕಾರ್ಡ್/ರೇಷನ್ ಕಾರ್ಡ್ ಸಲ್ಲಿಸುವುದು.

**ನಿಯಮ 41: ಶ್ರಮಸಾಮರ್ಥ್ಯ ಟೂಲ್‌ಕಿಟ್ ವಿತ್ ಟ್ರೈನಿಂಗ್ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.**

- ನಮೂನೆ-15 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ / ಸ್ಮಾರ್ಟ್ ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಫಲಾನುಭವಿಯ ಸದಸ್ಯತ್ವ ಅವಧಿಯಲ್ಲಿ ಒಂದು ಬಾರಿ ಮಾತ್ರ ಈ ಸೌಲಭ್ಯವನ್ನು ಪಡೆದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.
- ಫಲಾನುಭವಿಯು ತರಬೇತಿ ಪಡೆಯಲು 55 ವರ್ಷ ವಯಸ್ಸಿನ ಒಳಗಿರಬೇಕು.

**ನಿಯಮ 42: ಮನೆ ಖರೀದಿ ಅಥವಾ ನಿರ್ಮಾಣಕ್ಕಾಗಿ (ಕಾರ್ಮಿಕ ಗೃಹ ಭಾಗ್ಯ) ನೀಡುವ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ-16 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿ ಸಲ್ಲಿಸುವುದು
- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ.
- ಅರ್ಜಿ ಸಲ್ಲಿಸುವ ಫಲಾನುಭವಿಗೆ ಕನಿಷ್ಠ 45 ವರ್ಷ ವಯಸ್ಸಾಗಿರಬೇಕು
- ಸರ್ಕಾರದಿಂದ ಯಾವುದಾದರೂ ಯೋಜನೆಯಡಿ ಮನೆ ನಿರ್ಮಾಣಕ್ಕಾಗಿ ಸಾಲ ಮಂಜೂರಾಗಿರಬೇಕು
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್‌ಬುಕ್‌ನ ಪ್ರತಿ ಸಲ್ಲಿಸುವುದು

**ನಿಯಮ 43: ಹೆರಿಗೆ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.**

- ನಮೂನೆ–17 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ / ಸ್ಮಾರ್ಟ್ ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ನೋಂದಾಯಿತ ಮಹಿಳಾ ಫಲಾನುಭವಿಯು ತನ್ನ ಮೊದಲ 2 ಹೆರಿಗೆಗಳಿಗೆ ಸಹಾಯಧನವನ್ನು ಪಡೆಯಲು ಅರ್ಹರಾಗಿರುತ್ತಾಳೆ. (ಕೇವಲ ಎರಡು ಜೀವಂತ ಮಕ್ಕಳಿದ್ದಾರೆ ಎನ್ನುವುದನ್ನು ಖಚಿತ ಪಡಿಸಿಕೊಳ್ಳಬೇಕು.)
- ಇದು ಎರಡನೇ ಹೆರಿಗೆ ಎಂದು ಅಫಿಡವಿಟ್ ಸಲ್ಲಿಸಬೇಕು.
- ಜನನ ಮತ್ತು ಮರಣ ಪ್ರಮಾಣ ನೊಂದಣಾಧಿಕಾರಿಗಳಿಂದ ಪಡೆದ ಜನನ ಪ್ರಮಾಣ ಪತ್ರ ಸಲ್ಲಿಸಬೇಕು.
- ಹೆರಿಗೆಯಾದ 6 ತಿಂಗಳೊಳಗೆ ಅರ್ಜಿಯನ್ನು ಸಲ್ಲಿಸಬೇಕು.

**ನಿಯಮ 43–ಎ: ಪೂರ್ವ ಪ್ರಾಥಮಿಕ ಶಿಕ್ಷಣ ಹಾಗೂ ಪೌಷ್ಠಿಕಾಂಶಗಳನ್ನು ಮಹಿಳಾ ಫಲಾನುಭವಿಯು ಮೊದಲ ಎರಡು ಮಕ್ಕಳಿಗಾಗಿ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್. (ತಾಯಿ ಮಗು ಸಹಾಯ ಹಸ್ತ)**

- ನಮೂನೆ–17–ಎ ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ / ಸ್ಮಾರ್ಟ್ ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ನೋಂದಾಯಿತ ಮಹಿಳಾ ಫಲಾನುಭವಿಯು ತನ್ನ ಮೊದಲ ಎರಡು ಹೆರಿಗೆಗಳಿಗೆ ಸಹಾಯಧನವನ್ನು ಪಡೆಯಲು ಅರ್ಹರಾಗಿರುತ್ತಾಳೆ.
- ಎರಡನೇ ಹೆರಿಗೆಗೆ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಫಿಡವಿಟ್ ಸಲ್ಲಿಸಬೇಕು.
- ಜನನ ಮತ್ತು ಮರಣ ಪ್ರಮಾಣ ಅಧಿಕಾರಿಗಳಿಂದ ಜನನ ಪ್ರಮಾಣ ಪತ್ರ ಸಲ್ಲಿಸಬೇಕು.
- ಹೆರಿಗೆಯಾದ 6 ತಿಂಗಳೊಳಗೆ ಅರ್ಜಿಯನ್ನು ಸಲ್ಲಿಸಬೇಕು

**ನಿಯಮ 44: ಅಂತ್ಯಕ್ರಿಯೆ ಸಂಸ್ಕಾರ ಮತ್ತು ಅನುಗ್ರಹರಾಶಿ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.**

- ನಮೂನೆ–18 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ / ಸ್ಮಾರ್ಟ್ ಕಾರ್ಡ್ ಸಲ್ಲಿಸುವುದು.

- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಮೃತ ಫಲಾನುಭವಿಯ ಮೂಲ / ದೃಢೀಕೃತ ಮರಣ ಪ್ರಮಾಣ ಪತ್ರವನ್ನು ಲಗತ್ತಿಸಬೇಕು.
- ಮೃತ ಫಲಾನುಭವಿಯ ವಯಸ್ಸು 60 ವರ್ಷ ಮೀರದಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳಬೇಕು.
- ಅರ್ಜಿದಾರನನ್ನು ಮೃತ ಫಲಾನುಭವಿಯ ನಾಮನಿರ್ದೇಶಿತನಾಗಿ ನೋಂದಾಯಿಸಲಾಗಿದೆಯೇ ಎಂದು
  ಖಚಿತ ಪಡಿಸಿಕೊಳ್ಳಬೇಕು.
- ಫಲಾನುಭವಿಯು ಮೃತನಾದ ಒಂದು ವರ್ಷದೊಳಗೆ ಅರ್ಜಿಯನ್ನು ಸಲ್ಲಿಸಬೇಕು.

**<u>ನಿಯಮ 45: ಶೈಕ್ಷಣಿಕ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್</u>**

- ನಮೂನೆ-19 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ / ಸ್ಮಾರ್ಟ್ ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ
- ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಫಲಾಭವಿಯ ಮಗ / ಮಗಳು ಉತ್ತೀರ್ಣ ಆಗಿರುವ ಕುರಿತು ಅಂಕಪಟ್ಟಿ ಹಾಗೂ ವ್ಯಾಸಂಗ ಮಾಡುತ್ತಿರುವ
- ಸಂಸ್ಥೆಯ ಮುಖ್ಯಸ್ಥರಿಂದ ವ್ಯಾಸಂಗ ಮೂಲ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
- ಫಲಾನುಭವಿಯ ಪ್ರಸ್ತುತ ಅರ್ಜಿಯು ಈ ಹಿಂದೆ ಶೈಕ್ಷಣಿಕ ಸಹಾಯಧನ ಪಡೆದ ಇಬ್ಬರು ಮಕ್ಕಳಿಗೆ ಅನ್ವಯಿಸಲಾಗಿದೆಯೇ ಎಂದು ಖಾತ್ರಿ ಪಡಿಸಿಕೊಳ್ಳಬೇಕು.
- ಶೈಕಣಿಕ ಸಹಾಯಧನ ಅರ್ಜಿಯನ್ನು ಶೈಕ್ಷಣಿಕ ವರ್ಷ ಪ್ರಾರಂಭವಾದ ದಿನದಿಂದ 6 ತಿಂಗಳ ಒಳಗೆ ಸಲ್ಲಿಸಬೇಕು.

**<u>ನಿಯಮ 46: ಒಳರೋಗಿ ವೈದ್ಯಕೀಯ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್</u>**

- ನಮೂನೆ-20 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ / ಸ್ಮಾರ್ಟ್ ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.

- ಫಲಾನುಭವಿಯು ಆಸ್ಪತ್ರೆಯಲ್ಲಿ ದಾಖಲಾದ ದಿನಾಂಕ ಹಾಗೂ ಬಿಡುಗಡೆಯಾದ ದಿನಾಂಕ ವಿವರಗಳನ್ನು ನಮೂದಿಸಬೇಕು.
- ಫಲಾನುಭವಿಯು ಸರ್ಕಾರಿ / ಸರ್ಕಾರದಿಂದ ಮಾನ್ಯತೆ ಪಡೆದ (ಶೆಡ್ಯೂಲ್ 1ಗೆ ಸೇರಿದ) ಖಾಸಗಿ ಆಸ್ಪತ್ರೆಗಳಲ್ಲಿ ಕನಿಷ್ಠ ಎರಡು ದಿನ ಒಳರೋಗಿಯಾಗಿ ದಾಖಲಾಗಿರುವ ಬಗ್ಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
- ಆಸ್ಪತ್ರೆಗೆ ದಾಖಲಾದ ದಿನಾಂಕದಿಂದ 6 ತಿಂಗಳೊಳಗೆ ಅರ್ಜಿಯನ್ನು ಸಲ್ಲಿಸಬೇಕು

## ನಿಯಮ 47: ಅಪಘಾತ ಮರಣ, ಶಾಶ್ವತ ಸಂಪೂರ್ಣ / ಭಾಗಶಃ ದುರ್ಬಲತೆ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ನಮೂನೆ-21 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ.
- ಮಂಡಳಿಯಿಂದ ನೀಡಿರುವ ಮೂಲ ಗುರುತಿನ ಚೀಟಿ / ಸ್ಮಾರ್ಟ್ ಕಾರ್ಡ್ ಸಲ್ಲಿಸುವುದು.
- ಫಲಾನುಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ.
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ದೃಢೀಕೃತ ಮರಣ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
- ಅಪಘಾತದ ಸ್ವರೂಪವನ್ನು ನಮೂದಿಸಬೇಕು.
- ದುರ್ಬಲತೆ ಪ್ರಕರಣವಿದ್ದಲ್ಲಿ, ಅಪಘಾತದ ಪರಿಣಾಮವಾಗಿರುವ ಶಾಶ್ವತ-ಸಂಪೂರ್ಣ (ಪ್ರತಿ ಶತಃ 100ರಷ್ಟು) ಅಥವಾ ಶಾಶ್ವತ-ಭಾಗಶಃ (ಪ್ರತಿ ಶತಃ 100ಕ್ಕಿಂತ ಕಡಿಮೆ) ದುರ್ಬಲತೆಯಾದ ಬಗ್ಗೆ ಹಾಗೂ ದುರ್ಬಲತೆಯ ಶೇಕಡವಾರು ಪ್ರಮಾಣ ನಮೂದಿಸಬೇಕು.
- ಫಲಾನುಭವಿಗೆ ದುರ್ಬಲತೆಯಾದ ನಂತರ ತಪಾಸಣೆ ಮಾಡಿದ ಸರ್ಕಾರಿ / ಸರ್ಕಾರದ ಮಾನ್ಯತೆ ಪಡೆದ ಖಾಸಗಿ ಆಸ್ಪತ್ರೆ ವೈದ್ಯರಿಂದ ಶೇಕಡವಾರು ದುರ್ಬಲತೆ ಖಚಿತ ಪಡಿಸಿರುವ ವೈಧ್ಯಕೀಯ ಪ್ರಮಾಣ ಪತ್ರವನ್ನು ಲಗತ್ತಿಸುವುದು.
- ನಮೂನೆ 21ಎ ನಲ್ಲಿ ನಿಯೋಜಕರಿಂದ ಪಡೆದ ವರದಿಯನ್ನು ಸಲ್ಲಿಸಬೇಕು.
- ಅಪಘಾತ ಸಂಭವಿಸಿದ ಒಂದು ವರ್ಷದೊಳಗೆ ಅರ್ಜಿಯನ್ನು ಸಲ್ಲಿಸಬೇಕು.

## ನಿಯಮ 48: ಪ್ರಮುಖ ವೈದ್ಯಕೀಯ ವೆಚ್ಚ (ಕಾರ್ಮಿಕ ಚಿಕಿತ್ಸಾ ವೆಚ್ಚ) ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:

- ನಮೂನೆ-22 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ
- ನಮೂನೆ-22 (ಎ) ರಲ್ಲಿ ಚಿಕಿತ್ಸೆ ನೀಡಿದ ವೈದ್ಯರಿಂದ ಮಾಹಿತಿಯನ್ನು ಭರ್ತಿ ಮಾಡಿ ಸಲ್ಲಿಸುವುದು
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿ/ಸ್ಮಾರ್ಟ್ ಕಾರ್ಡ್ ಪ್ರತಿ ಸಲ್ಲಿಸುವುದು

- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ಸರ್ಕಾರಿ/ಸರ್ಕಾರದಿಂದ ಮಾನ್ಯತೆ ಪಡೆದ ಖಾಸಗಿ ಆಸ್ಪತ್ರೆ/ಆರ್.ಎಸ್.ಬಿ.ವೈ. ಯೋಜನೆಯಿಂದ ಮಾನ್ಯತೆ ಪಡೆದ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿರಬೇಕು.
- ಆಸ್ಪತ್ರೆಯಿಂದ ಬಿಡುಗಡೆಯಾದ 6 ತಿಂಗಳೊಳಗಾಗಿ ಅರ್ಜಿ ಸಲ್ಲಿಸಬೇಕು
- ಚಿಕಿತ್ಸೆ ಪಡೆದ ಮೂಲ ವೈದ್ಯಕೀಯ ದಾಖಲೆಗಳನ್ನು ಮತ್ತು ಬಿಲ್ಲುಗಳನ್ನು ಸಲ್ಲಿಸುವುದು
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್‌ಬುಕ್‌ನ ಪ್ರತಿ ಸಲ್ಲಿಸುವುದು

**ನಿಯಮ 49: ಮದುವೆ ಸಹಾಯಧನ (ಗೃಹಲಕ್ಷ್ಮೀ ಬಾಂಡ್) ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ-23 ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿ/ಸ್ಮಾರ್ಟ್ ಕಾರ್ಡ್ ಪ್ರತಿ ಸಲ್ಲಿಸುವುದು
- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ನೋಂದಣಿಯಾಗಿ ಒಂದು ವರ್ಷ ಪೂರೈಯಿಸಿದ ನಂತರ ಫಲಾನುಭವಿ/ಮಕ್ಕಳಿಗೆ ಮದುವೆಯಾಗಿರಬೇಕು
- ಮದುವೆಯಾದ 6 ತಿಂಗಳ ಒಳಗಾಗಿ ಅರ್ಜಿ ಸಲ್ಲಿಸಬೇಕು
- ಫಲಾನುಭವಿಯು ಹೊಂದಿರುವ ಬ್ಯಾಂಕ್ ಪಾಸ್‌ಬುಕ್‌ನ ಪ್ರತಿ ಸಲ್ಲಿಸುವುದು

**ನಿಯಮ 49(ಡಿ): ಕಾರ್ಮಿಕ ಅನಿಲ ಭಾಗ್ಯ ಸೌಲಭ್ಯ (ಎಲ್‌ಪಿಜಿ) ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್**

- ನಮೂನೆ-23 (ಎ) ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿ/ಸ್ಮಾರ್ಟ್ ಕಾರ್ಡ್ ಪ್ರತಿ ಸಲ್ಲಿಸುವುದು
- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ಫಲಾನುಭವಿಯ ಕುಟುಂಬದ ಒಬ್ಬ ಸದಸ್ಯರು ಮಾತ್ರ ಸೌಲಭ್ಯ ಪಡೆಯಲು ಅವಕಾಶವಿರುತ್ತದೆ.
- ಆಧಾರ್ ಕಾರ್ಡ್, ಪಡಿತರ ಚೀಟಿ ಮತ್ತು ನೋಟರಿಯಿಂದ ಪಡೆದ ಅಫಿಡೆವಿಟ್ ಅಥವಾ ಆಹಾರ ನೀರೀಕ್ಷಕರಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.

**ನಿಯಮ 49(ಇ): ಬಿ.ಎಂ.ಟಿ.ಸಿ. ಬಸ್ ಪಾಸ್ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ-23 (ಬಿ) ಶಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿ/ಸ್ಮಾರ್ಟ್ ಕಾರ್ಡ್ ಪ್ರತಿ ಸಲ್ಲಿಸುವುದು

- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಖಾಯಂ ವಿಳಾಸ ಹೊಂದಿರುವ ಫಲಾನುಭವಿಯಾಗಿರಬೇಕು
- ಆಧಾರ್ ಕಾರ್ಡ್ ಮತ್ತು ಪಡಿತರ ಚೀಟಿ ಪ್ರತಿ ಸಲ್ಲಿಸುವುದು.
- ಬಿಎಂಟಿಸಿ ಸಂಸ್ಥೆ ನೀಡುವ ಬಸ್ ಪಾಸ್ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸುವುದು.

**ನಿಯಮ 49(ಎಫ್): ಕೆ.ಎಸ್.ಆರ್.ಟಿ.ಸಿ. ಬಸ್‌ಪಾಸ್ ಸೌಲಭ್ಯ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್:**

- ನಮೂನೆ–23 (ಸಿ) ರಲ್ಲಿ ಪೂರ್ಣವಾದ ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿ/ಸ್ಮಾರ್ಟ್ ಕಾರ್ಡ್ ಪ್ರತಿ ಸಲ್ಲಿಸುವುದು
- ಫಲಾಭವಿಯು ವಂತಿಕೆ ಹಣ ಪೂರ್ಣವಾಗಿ ಪಾವತಿಸಿರುವ ಬಗ್ಗೆ ನೋಂದಣಿ ಅಧಿಕಾರಿಗಳಿಂದ ದೃಢೀಕರಣ ಪತ್ರ
- ಫಲಾನುಭವಿಯ ಇಬ್ಬರು ಮಕ್ಕಳಿಗೆ ಮಾತ್ರ ಖಾಯಂ ವಿಳಾಸದಿಂದ ವಿದ್ಯಾ ಸಂಸ್ಥೆಯವರಿಗೆ ಕೆ.ಎಸ್.ಆರ್.ಟಿ.ಸಿ. ಬಸ್‌ಪಾಸ್ ಸೌಲಭ್ಯ ಪಡೆಯಲು ಅವಕಾಶವಿರುತ್ತದೆ.
- ಆಧಾರ್ ಕಾರ್ಡ್ ಮತ್ತು ಪಡಿತರ ಚೀಟಿ ಪ್ರತಿ ಸಲ್ಲಿಸುವುದು.
- ಕೆ.ಎಸ್.ಆರ್.ಟಿ.ಸಿ. ಸಂಸ್ಥೆ ನೀಡುವ ಬಸ್ ಪಾಸ್ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸುವುದು

# ಅನುಬಂಧ-6

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಹೆಚ್.ಎಂ ರಮೇಶಗೌಡ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 461 ರ ಉತ್ತರಕ್ಕೆ

## ಹಾಸನ ಜಿಲ್ಲೆಯಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಸೌಲಭ್ಯ ನೀಡಿರುವ ತಾಲ್ಲೂಕುವಾರು ವಿವರ

2019-20

| ವೃತ್ತ | ಶೈಕ್ಷಣಿಕ | | ಮದುವೆ | | ವೈದ್ಯಕೀಯ ವೆಚ್ಚ | | ಪ್ರಮುಖ ವೈದ್ಯಕೀಯ | | ಹೆರಿಗೆ ಧನಸಹಾಯ | | ಅಂತ್ಯ ಸಂಸ್ಕಾರ ಮತ್ತು ಅನುಗ್ರಹ ರಾಶಿ | | ಅಪಘಾತ ಮರಣ/ಭಾಗಶಃ/ಶಾಶ್ವತ ದುರ್ಬಲತೆ | | ಪಿಂಚಣಿ | |
|---|---|---|---|---|---|---|---|---|---|---|---|---|---|---|---|---|
| | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ |
| ಹಾಸನ | 3155 | 26529170 | 206 | 10300000 | 0 | 0 | 49 | 1985469 | 1 | 15000 | 29 | 1566000 | 1 | 150000 | 7 | 55000 |
| ಆಲೂರು | 1075 | 9167590 | 64 | 3200000 | 0 | 0 | 11 | 502650 | 1 | 30000 | 0 | 0 | 0 | 0 | 0 | 0 |
| ಬೇಲೂರು | 368 | 3232000 | 36 | 1800000 | 0 | 0 | 4 | 91000 | 0 | 0 | 3 | 162000 | 0 | 0 | 0 | 0 |
| ಸಕಲೇಶಪುರ | 181 | 1636590 | 23 | 1150000 | 0 | 0 | 0 | 0 | 0 | 0 | 0 | 0 | 0 | 0 | 1 | 10000 |
| ಅರಕಲಗೂಡು | 387 | 3189000 | 41 | 2050000 | 0 | 0 | 1 | 21500 | 0 | 0 | 2 | 108000 | 1 | 300000 | 0 | 0 |
| ಅರಸೀಕೆರೆ | 568 | 4231000 | 58 | 2900000 | 0 | 0 | 2 | 74200 | 0 | 0 | 6 | 324000 | 0 | 0 | 0 | 0 |
| ಚನ್ನರಾಯಪಟ್ಟಣ | 1036 | 8818500 | 129 | 6450000 | 0 | 0 | 4 | 179500 | 0 | 0 | 6 | 324000 | 1 | 500000 | 0 | 0 |
| ಹೊಳೆನರಸೀಪುರ | 468 | 3908000 | 52 | 2600000 | 1 | 900 | 0 | 0 | 0 | 0 | 1 | 54000 | 1 | 500000 | 0 | 0 |
| **ಒಟ್ಟು** | **7238** | **60711850** | **609** | **30450000** | **01** | **900** | **71** | **2854319** | **02** | **45000** | **47** | **2538000** | **4** | **1450000** | **8** | **65000** |

| ವೃತ್ತ | ಶೈಕ್ಷಣಿಕ | | ಮದುವೆ | | ವೈದ್ಯಕೀಯ ವೆಚ್ಚ | | ಪ್ರಮುಖ ವೈದ್ಯಕೀಯ | | ಹೆರಿಗೆಧನ ಸಹಾಯ | | ತಾಯಿ ಮಗು ಸಹಾಯ ಹಸ್ತ | | ಅಂತ್ಯ ಸಂಸ್ಕಾರ ಮತ್ತುಅನು ಗ್ರಹ ರಾಶಿ | | ಅಪಘಾತ ಮರಣ/ಭಾಗಶಃ/ ಶಾಶ್ವತ ದುರ್ಬಲತೆ | | ಪಿಂಚಣಿ | | ಕೋವಿಡ್-19 ಪರಿಹಾರ-5000/- | |
|---|---|---|---|---|---|---|---|---|---|---|---|---|---|---|---|---|---|---|---|---|
| 2020-21 | | | | | | | | | | | | | | | | | | | | |
| | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ |
| ಹಾಸನ | 2140 | 30587000 | 130 | 6500000 | 0 | 0 | 52 | 3243632 | 0 | 0 | 0 | 0 | 34 | 1836000 | 5 | 2500000 | 57 | 1368000 | 13900 | 69500000 |
| ಆಲೂರು | 326 | 5007000 | 15 | 9750000 | 0 | 0 | 10 | 686094 | 0 | 0 | 0 | 0 | 0 | 0 | 0 | 0 | 0 | 0 | 800 | 4000000 |
| ಬೇಲೂರು | 114 | 2240000 | 18 | 900000 | 0 | 0 | 0 | 0 | 0 | 0 | 0 | 0 | 3 | 162000 | 0 | 0 | 05 | 120000 | 2616 | 13080000 |
| ಸಕಲೇಶ ಪುರ | 47 | 674000 | 06 | 300000 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 1161 | 5805000 |
| ಅರಕಲ ಗೂಡು | 36 | 348000 | 34 | 1700000 | 0 | 0 | 02 | 50183 | 01 | 20000 | 0 | 0 | 4 | 216000 | 0 | 0 | 15 | 360000 | 2930 | 14650000 |
| ಅರಸೀಕೆರೆ | 263 | 3214000 | 43 | 2150000 | 0 | 0 | 1 | 35000 | 0 | 0 | 0 | 0 | 1 | 54000 | 1 | 500000 | 1 | 24000 | 3739 | 18695000 |
| ಚನ್ನರಾಯ ಪಟ್ಟಣ | 259 | 3272000 | 70 | 3500000 | 0 | 0 | 16 | 966481 | 06 | 150000 | 02 | 12000 | 9 | 486000 | 0 | 0 | 19 | 456000 | 5009 | 25045000 |
| ಹೊಳೆನರ ಸೀಪುರ | 37 | 469000 | 24 | 1200000 | 0 | 0 | 0 | 0 | 0 | 0 | 0 | 0 | 5 | 270000 | 4 | 2000000 | 07 | 168000 | 2536 | 12680000 |
| **ಒಟ್ಟು** | **3222** | **45811000** | **340** | **26000000** | **0** | **0** | **81** | **4981390** | **07** | **170000** | **02** | **12000** | **56** | **3024000** | **10** | **5000000** | **104** | **2496000** | **32691** | **163455000** |

| 2021-22 | | | | | | | | | | | | | | | | | | | | |
|---|---|---|---|---|---|---|---|---|---|---|---|---|---|---|---|---|---|---|---|---|
| ವೃತ್ತ | ಶೈಕ್ಷಣಿಕ | | ಮದುವೆ | | ವೈದ್ಯಕೀಯ ವೆಚ್ಚ | | ಪ್ರಮುಖ ವೈದ್ಯಕೀಯ | | ಹೆರಿಗೆ ಧನಸಹಾಯ | | ತಾಯಿ ಮಗು ಸಹಾಯ ಹಸ್ತ | | ಅಂತ್ಯ ಸಂಸ್ಕಾರ ಮತ್ತುಅನುಗ್ರಹ ರಾಶಿ | | ಅಪಘಾತ ಮರಣ/ ಭಾಗಶಃ/ ಶಾಶ್ವತ ದುರ್ಬಲತೆ | | ಪಿಂಚಣಿ | | ಕೋವಿಡ್-19 ಪರಿಹಾರ-3000/- | |
| | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ |
| ಹಾಸನ | 3430 | 50229000 | 189 | 9450000 | 06 | 11700 | 117 | 7446363 | 01 | 20000 | 0 | 0 | 20 | 1080000 | 0 | 0 | 35 | 350000 | 12356 | 37068000 |
| ಆಲೂರು | 330 | 9819000 | 36 | 1800000 | 01 | 900 | 17 | 1195279 | 01 | 20000 | 0 | 0 | 0 | 0 | 0 | 0 | 0 | 0 | 1474 | 4422000 |
| ಬೇಲೂರು | 363 | 5667000 | 23 | 1150000 | 0 | 0 | 2 | 117500 | 01 | 30000 | 0 | 0 | 1 | 54000 | 1 | 500000 | 03 | 30000 | 2631 | 7893000 |
| ಸಕಲೇಶಪುರ | 126 | 1756000 | 8 | 400000 | 0 | 0 | 2 | 59438 | 0 | 0 | 0 | 0 | 1 | 54000 | 0 | 0 | 0 | 0 | 1006 | 3018000 |
| ಅರಕಲಗೂಡು | 323 | 4295000 | 37 | 1850000 | 0 | 0 | 6 | 360034 | 01 | 30000 | 0 | 0 | 1 | 54000 | 0 | 0 | 10 | 100000 | 2771 | 8313000 |
| ಅರಸೀಕೆರೆ | 755 | 10072000 | 56 | 2800000 | 0 | 0 | 03 | 206000 | 05 | 130000 | 02 | 12000 | 0 | 0 | 0 | 0 | 05 | 50000 | 5767 | 17301000 |
| ಚನ್ನರಾಯಪಟ್ಟಣ | 1076 | 14667000 | 94 | 4700000 | 01 | 900 | 38 | 2516628 | 05 | 130000 | 02 | 12000 | 3 | 324000 | 0 | 0 | 10 | 100000 | 8407 | 25221000 |
| ಹೊಳೆನರಸೀಪುರ | 384 | 5627000 | 26 | 1300000 | 0 | 0 | 04 | 286500 | 0 | 0 | 0 | 0 | 2 | 108000 | 1 | 500000 | 11 | 110000 | 3120 | 9360000 |
| ಒಟ್ಟು | 6787 | 102132000 | 469 | 23450000 | 08 | 13500 | 189 | 12187742 | 14 | 360000 | 04 | 24000 | 28 | 1674000 | 2 | 1000000 | 74 | 740000 | 37532 | 112596000 |

## ಅನುಬಂಧ-4

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:461**

**ಕಳೆದ 2 ವರ್ಷಗಳಲ್ಲಿ (ಪ್ರಸಕ್ತ ವರ್ಷವು ಸೇರಿದಂತೆ) ಹಾಸನ ಜಿಲ್ಲೆಯಲ್ಲಿ ಸೌಲಭ್ಯ ಪಡೆದ ಅಸಂಘಟಿತ ಕಾರ್ಮಿಕರ ಸೌಲಭ್ಯವಾರು ಹಾಗೂ ತಾಲ್ಲೂಕುವಾರು ಮಾಹಿತಿಯ ವಿವರ**

| ಕ್ರ.ಸಂ | ತಾಲ್ಲೂಕು | ಅಪಘಾತ ಪರಿಹಾರ | ಶೈಕ್ಷಣಿಕ ಧನ ಸಹಾಯ | ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ | ಕೋವಿಡ್ –19 ರಡಿ ನೆರವು |
|---|---|---|---|---|---|
| 01 | ಆಲೂರು | 2 | 2 | 75 | 424 |
| 02 | ಅರಕಲಗೂಡು | 3 | – | 160 | 1964 |
| 03 | ಅರಸಿಕೆರೆ | 1 | – | 375 | 4973 |
| 04 | ಬೇಲೂರು | – | – | 439 | 1494 |
| 05 | ಚನ್ನರಾಯಪಟ್ಟಣ | 3 | – | 156 | 4295 |
| 06 | ಹಾಸನ | 7 | 3 | 610 | 3313 |
| 07 | ಹೊಳೇ ನರಸೀಪುರ | – | – | 265 | 1701 |
| 08 | ಸಕಲೇಶ್‌ಪುರ | 1 | 2 | 138 | 664 |
| ಒಟ್ಟು | | **17** | **7** | **2218** | **18828** |

## ಅನುಬಂಧ-8

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:461**

**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ**

| ಕ್ರ.ಸಂ | ಕಲ್ಯಾಣ ಯೋಜನೆಗಳು | ಮಾನದಂಡಗಳು |
|---|---|---|
| 1 | ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ | ಕಾರ್ಮಿಕ ಕಲ್ಯಾಣ ಮಂಡಳಿಗೆ ವಂತಿಗೆ ಪಾವತಿ ಮಾಡುವ ವಿವಿಧ ಕಾರ್ಖಾನೆಗಳು/ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಂಘಟಿತ ಕಾರ್ಮಿಕರ ಮಕ್ಕಳಿಗೆ, ಹಿಂದಿನ ವರ್ಷದ ತರಗತಿಯಲ್ಲಿ ಸಾಮಾನ್ಯ ವರ್ಗದವರಿಗೆ ಶೇ.50 ರಷ್ಟು ಪಜಾ/ಪ. ವರ್ಗದವರಿಗೆ ಶೇ.45 ರಷ್ಟು ಅಂಕ ಪಡೆದು ತೇರ್ಗಡೆ ಹೊಂದಿದವರಿಗೆ 8ನೇ ತರಗತಿಯಿಂದ ಪದವಿ, ಸ್ನಾತಕೋತ್ತರ ಪದವಿ, ಇಂಜಿನಿಯರಿಂಗ್/ವೈದ್ಯಕೀಯ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ನೀಡಲಾಗುವುದು. |
| 2 | ಕಾರ್ಮಿಕರಿಗೆ ವೈದ್ಯಕೀಯ ನೆರವು | ದೀರ್ಘ ಕಾಲದ ಖಾಯಿಲೆಗಳಾದ ಹೃದಯ ಸಂಬಂಧಿತ ಖಾಯಿಲೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್ ಇತ್ಯಾದಿ ಖಾಯಿಲೆಯಿಂದ ಬಳಲುವ ಸಂಘಟಿತ ಕಾರ್ಮಿಕರಿಗೆ ಚಿಕಿತ್ಸೆ ಪಡೆದ 6 ತಿಂಗಳೊಳಗೆ ನಿಗದಿತ ನಮೂನೆಯಲ್ಲಿ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವುದು. |
| 3 | ಕಾರ್ಮಿಕರಿಗೆ ಅಪಘಾತ ಧನ ಸಹಾಯ. | ಕೆಲಸದ ವೇಳೆಯಲ್ಲಿ ಅಪಘಾತವಾದಲ್ಲಿ ಮೂರು ತಿಂಗಳೊಳಗೆ ಸೂಕ್ತ ದಾಖಲೆಗಳೊಂದಿಗೆ ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸುವುದು |
| 4 | ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ. | ಮೃತರ ಕುಟುಂಬದ ಅವಲಂಬಿತರು ಕಾರ್ಮಿಕ ಮೃತ ಪಟ್ಟ 6 ತಿಂಗಳೊಳಗೆ ನಿಗಧಿತ ನಮೂನೆಯಲ್ಲಿ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವುದು |
| 5 | ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ ಸಂಸ್ಥೆಗಳಿಗೆ ಧನಸಹಾಯ | ನೊಂದಾಯಿತ ಕಾರ್ಮಿಕ ಸಂಘಟನೆಗಳು /ಸರ್ಕಾರೇತರ ಸಂಸ್ಥೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ವೈದ್ಯಕೀಯ ತಪಾಸಣಾ ಶಿಬಿರ ಹಮ್ಮಿಕೊಂಡಲ್ಲಿ ಧನ ಸಹಾಯ ನೀಡಲಾಗುವುದು |
| 6 | ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ | ನೊಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಕ್ರೀಡಾಕೂಟ ಹಮ್ಮಿಕೊಂಡಲ್ಲಿ ಧನ ಸಹಾಯ ನೀಡಲಾಗುವುದು |
| 7 | ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆಗೆ ಧನ ಸಹಾಯ | ಸಂಘಟಿತ ಮಹಿಳಾ ಕಾರ್ಮಿಕರಿಗೆ ಮೊದಲ ಎರಡು ಮಕ್ಕಳಿಗೆ ಹೆರಿಗೆಗೆ ಧನ ಸಹಾಯ ನೀಡಲಾಗುವುದು.<br>ಸದರಿ ಯೋಜನೆ 2021-22ನೇ ಸಾಲಿನಲ್ಲಿ ಜಾರಿಯಾಗಿರುತ್ತದೆ. |